# ಕರ್ನಾಟಕ ವಿಧಾನ ಸಭೆ

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 953 |
| ಸದಸ್ಯರ ಹೆಸರು | ಶ್ರೀ. ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರದವರು) |
| ಉತ್ತರಿಸಬೇಕಾದ ದಿನಾಂಕ | 14-03-2025 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಗ್ರಾಮೀಣ ಭಾಗದ ರಸ್ತೆ ಸಂಪರ್ಕ ಜಾಲವನ್ನು ವ್ಯವಸ್ಥಿತವಾಗಿ ಮತ್ತು ಗುಣಾತ್ಮಕವಾಗಿ ಅಭಿವೃದ್ಧಿಪಡಿಸಲು "ಪ್ರಗತಿ ಪಥ" ಯೋಜನೆಯನ್ನು ಪ್ರಾರಂಭಿಸಿ ಈ ಯೋಜನೆ ಅಡಿಯಲ್ಲಿ 189 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ತಲಾ 50 ಕಿ.ಮೀ ಉದ್ದದ ರಸ್ತೆಗಳಂತೆ. ಒಟ್ಟಾರೆಯಾಗಿ 7,450 ಕಿ.ಮೀ. ಉದ್ದದ ರಸ್ತೆ ಸಂಪರ್ಕ ಜಾಲವನ್ನು 5,200 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು ಎಂದು ಈ ಹಿಂದೆ ಆಯವ್ಯಯದಲ್ಲಿ ಘೋಷಿಸಿದ್ದು, ಸದರಿ ಯೋಜನೆಗೆ ಚಾಲನೆ ನೀಡಲಾಗಿದೆಯೇ; | ಬಾಹ್ಯ ನೆರವಿನ ಪ್ರಗತಿಪಥ ಯೋಜನೆಯಡಿ 9,450 ಕಿ.ಮೀ ಉದ್ದದ ಗ್ರಾಮೀಣ ರಸ್ತೆಗಳನ್ನು ರೂ.5,200 ಕೋಟಿಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿರುತ್ತದೆ.<br><br>ಪ್ರಗತಿಪಥ ಯೋಜನೆಯಡಿ 9,450 ಕಿ.ಮೀ ಬದಲಿಗೆ 7,110.00 ಕಿ.ಮೀ ಉದ್ದದ ಗ್ರಾಮೀಣ ರಸ್ತೆಗಳನ್ನು ರೂ. 5,190.00 ಕೋಟಿಗಳಲ್ಲಿ ಅಭಿವೃದ್ಧಿಪಡಿಸಲು ದಿನಾಂಕ:12.03.2024 ರಂದು ಸರ್ಕಾರದಿಂದ ಪರಿಷ್ಕೃತ ಅನುಮೋದನೆಯನ್ನು ನೀಡಲಾಗಿರುತ್ತದೆ.<br><br>ಅದರಂತೆ, ದಿನಾಂಕ: 20.06.2024 ರಂದು ನಡೆದ ರಾಜ್ಯ ಸಚಿವ ಸಂಪುಟದಲ್ಲಿ ಯೋಜನೆಯ ಅನುಷ್ಠಾನಕ್ಕೆ ಅನುಮೋದನೆ ನೀಡಲಾಗಿರುತ್ತದೆ ಹಾಗೂ ಪ್ರಸ್ತಾಪಿತ ಯೋಜನೆಗೆ ದಿನಾಂಕ: 02.07.2024 ರಂದು ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.<br><br>ದಿನಾಂಕ: 15.07.2024 ರಂದು Preliminary Project Report (PPR) ವರದಿಯನ್ನು ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ಇಲಾಖೆ (D.E.A)ಯ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಲಾಗಿರುತ್ತದೆ.<br><br>ದಿನಾಂಕ: 23.09.2024 ರಂದು ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆಯು ಆರ್ಥಿಕ ವ್ಯವಹಾರಗಳ ಇಲಾಖೆಗೆ ಸಹಮತ ನೀಡಿರುತ್ತದೆ ಹಾಗೂ ನೀತಿ ಆಯೋಗವು ದಿನಾಂಕ: 11.11.2024 ರಂದು ಸಹಮತವನ್ನು ನೀಡಿರುತ್ತದೆ.<br><br>ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ಇಲಾಖೆ (D.E.A)ಯು ತಾತ್ವಿಕ ಸಹಮತಿಯನ್ನು ನೀಡಿ ಯೋಜನೆಯನ್ನು ಅನುಮೋದಿಸುವ ಬಗ್ಗೆ ಮುಂದಿನ ಕ್ರಮವಹಿಸಲು Asian Development Bank ರವರಿಗೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ. |

| | | |
|---|---|---|
| | | ಪ್ರಗತಿಪಥ ಯೋಜನೆಯ ಶೀಘ್ರ ಅನುಷ್ಠಾನದ ದೃಷ್ಠಿಯಿಂದ ಗ್ರಾಮಪಥ ತಂತ್ರಾಂಶದಲ್ಲಿ ಅರ್ಹ ರಸ್ತೆಗಳ ಆಯ್ಕೆ ಪ್ರಕ್ರಿಯೆಯು ಮುಕ್ತಾಯದ ಹಂತದಲ್ಲಿದ್ದು ಸದರಿ ಯೋಜನೆಗೆ ಇನ್ನು ಚಾಲನೆ ನೀಡಿರುವುದಿಲ್ಲ. |
| ಆ. | ಹಾಗಿದ್ದಲ್ಲಿ, ಯಾವ ಯಾವ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ರಸ್ತೆ ಕಾಮಗಾರಿಗಾಗಿ ಟೆಂಡರ್ ಕರೆಯಲಾಗಿದೆ; ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ; (ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ಹೆಸರು ಮತ್ತು ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು) | ಪ್ರಸ್ತುತ ಪ್ರಗತಿ ಪಥ ಯೋಜನೆಯಡಿ ಅರ್ಹ ರಸ್ತೆಗಳ ಆಯ್ಕೆ ಪ್ರಕ್ರಿಯೆ ಹಾಗೂ ಯೋಜನೆಯ ಪೂರ್ವಸಿದ್ಧತ ನಡೆಸುತ್ತಿರುವ ಹಂತದಲ್ಲಿರುವ ಪ್ರಯುಕ್ತ ಯಾವುದೇ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪ್ರಾಂಭವಾಗಿರುವುದಿಲ್ಲ ಹಾಗಾಗಿ ಅನ್ವಯಿಸುವುದಿಲ್ಲ. |
| ಇ. | ರಾಜ್ಯದಲ್ಲಿ ಎಷ್ಟು ರಸ್ತೆ ಕಾಮಗಾರಿಗಳು ಪ್ರಾರಂಭಗೊಂಡಿವೆ ಮತ್ತು ಎಷ್ಟು ಕಾಮಗಾರಿಗಳು ಬಾಕಿ ಉಳಿದಿವೆ; ಇವುಗಳನ್ನು ಯಾವಾಗ ಪ್ರಾರಂಭಗೊಳಿಸಿ ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು) | |

ಕಡತ ಸಂಖ್ಯೆ: ಗ್ರಾಅಪ/ಆರ್‌ಆರ್‌ಸಿ/ಪ್ರಶಾವಿಸ/16 ನೇವಿಸ/6ನೇಅ/ಪ್ರ.ಸಂ.953/2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಸಚಿವರು